ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/35/ಎಲ್‌ಆರ್‌ಡಿಸಿ/ಎನ್‌ಬಿಎ/2014-15

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ,
ಬೆಂಗಳೂರು-560001
ದಿನಾಂಕ: 25.01.2016

## ಸುತ್ತೋಲೆ

ವಿಷಯ: 2006-07 ಸಾಲಿನಲ್ಲಿ ರಾಜ್ಯದ ತಾಂತ್ರಿಕ ಶಿಕ್ಷಣ ಸಂಸ್ಥೆಗಳಲ್ಲಿ ಡಿಪ್ಲೋಮಾ ಪ್ರೋಗ್ರಾಂಗಳಿಗೆ ಎನ್.ಬಿ.ಎ ನವದೆಹಲಿ ವತಿಯಿಂದ ಮಾನ್ಯತೆ ಪಡೆಯಲು ತಮ್ಮ ಸಂಸ್ಥೆಗಳಿಂದ ಸಂದಯಾವಾಗಿರುವ ಮಾನ್ಯತಾ ಶುಲ್ಕಗಳ (ಅಕ್ರಿಡಿಟೇಶನ್ ಶುಲ್ಕ)ಗಳ ವಿವರಗಳನ್ನು ಸಲ್ಲಿಸುವ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯದ ಕೆಲವು ಸರ್ಕಾರಿ ಪಾಲಿಟೆಕ್ನಿಕ್‌ಗಳು 2006-07ನೇ ಸಾಲಿನಲ್ಲಿ ಮಾನ್ಯತೆ ಪಡೆಯಲು ಎನ್.ಬಿ.ಎ ನವದೆಹಲಿ ಇಲ್ಲಿ ಹಣ ಸಂದಾಯ ಮಾಡಿರುತ್ತಾರೆ. ಆದರೆ ಸಂಸ್ಥೆಯಲ್ಲಿ ಮಾನ್ಯತೆ ಪ್ರಕ್ರಿಯೆಗಳು ನಡೆಯದೇ ವಿಭಾಗವಾರು ಹಣ ಸಂದಾಯವಾಗಿರುತ್ತದೆ. ಈ ರೀತಿ ಶುಲ್ಕ ಸಂದಾಯ ಮಾಡಿದ ಚಲನ್‌ಗಳ ಪ್ರತಿಗಳನ್ನು ನಿರ್ದೇಶನಾಲಯಕ್ಕೆ ಮುಂದಿನ ಅಗತ್ಯ ಕ್ರಮ ಕೈಗೊಳ್ಳಲು ಈ ಕೂಡಲೇ ಸಲ್ಲಿಸಬೇಕೆಂದು ಸೂಚಿಸಲಾಗಿದೆ.

ನಿರ್ದೇಶಕರು
25/1/16

ಇವರಿಗೆ:

1 ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ
2 ಇ-ಆಡಳಿತ ವಿಭಾಗದ ಸಂಯೋಜಕರ ಸೂಕ್ತ ಕ್ರಮಕ್ಕಾಗಿ
3 ನಿರ್ದೇಶಕರ ಆಪ್ತ ಸಹಾಯಕರ ಮಾಹಿತಿಗಾಗಿ.

ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/35/ಎಲ್ಆರ್‌ಡಿಸಿ/ಎನ್‌ಬಿಎ/2014-15

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ,
ಬೆಂಗಳೂರು-560001
ದಿನಾಂಕ: 25.01.2016

## ಸುತ್ತೋಲೆ

ವಿಷಯ: ರಾಷ್ಟ್ರೀಯ ಮಾನ್ಯತಾ ಮಂಡಳಿಯಿಂದ ಮಾನ್ಯತೆ ಪಡೆಯುವ ನಿಟ್ಟಿನಲ್ಲಿ ಸ್ಪಷ್ಟ ಅಭಿಪ್ರಾಯ ನೀಡುವ ಬಗ್ಗೆ.

ಉಲ್ಲೇಖ: 1. ದಿನಾಂಕ:30-09-2015ರಂದು ನಡೆದ ಮೊದಲ ರಾಜ್ಯ ಮಟ್ಟದ ಮಾನ್ಯತಾ ಸಮಿತಿಯ ಸಭೆಯ ನಡವಳಿಗಳು.
2. ಡಿಟಿಇ/35/ಎಲ್ಆರ್‌ಡಿಇ/ಎನ್‌ಬಿಎ/2014-15, ದಿ: 01-01-2016

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1)ರ ನಿರ್ಣಯದಂತೆ ಹಾಗೂ ಉಲ್ಲೇಖ (2)ರನ್ವಯ ಈಗಾಗಲೇ ರಾಜ್ಯದ ಪಾಲಿಟೆಕ್ನಿಕ್‌ಗಳಲ್ಲಿ ಡಿಪ್ಲೋಮಾ ಪ್ರೋಗ್ರಾಂಗಳಿಗೆ ಎನ್.ಬಿ.ಎ ವತಿಯಿಂದ ಮಾನ್ಯತೆ ಪಡೆಯಲು ವಿವಿಧ ವಲಯಗಳಲ್ಲಿ ಕಾರ್ಯಾಗಾರವನ್ನು ಯಶಸ್ವಿಯಾಗಿ ನಡೆಸಲಾಗಿದ್ದು, ಈ ದಿಸೆಯಲ್ಲಿ ರಾಜ್ಯದ ಸರ್ಕಾರಿ ಪಾಲಿಟೆಕ್ನಿಕ್‌ಗಳ ಎಲ್ಲಾ ಪ್ರಾಂಶುಪಾಲರು ತಮ್ಮ ಸಂಸ್ಥೆಯಲ್ಲಿ ಯಾವ ಪ್ರೋಗ್ರಾಂಗಳಿಗೆ ಮಾನ್ಯತೆಯನ್ನು ಪಡೆಯಬಹುದೋ ಆ ಪ್ರೋಗ್ರಾಂಗಳಿಗೆ ಸ್ವಯಂ ಮೌಲ್ಯಮಾಪನ ವರದಿಗಳನ್ನು ತಮ್ಮ ಹಂತದಲ್ಲಿಯೇ ಭರ್ತಿ ಮಾಡಿ ಹಾಗೂ ವಿಶ್ಲೇಷಿಸಿ, ಸ್ಪಷ್ಟ ಅಭಿಪ್ರಾಯವನ್ನು ದಿನಾಂಕ: 29.02.2016 ರೊಳಗಾಗಿ ನಿರ್ದೇಶನಾಲಯಕ್ಕೆ ಸಲ್ಲಿಸಲು ಸೂಚಿಸಲಾಗಿದೆ.

ನಿರ್ದೇಶಕರು
25.1.16

ಇವರಿಗೆ

1 ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳ ಮುಂದಿನ ಸೂಕ್ತ ಕ್ರಮಕ್ಕಾಗಿ
2 ಇ-ಆಡಳಿತ ವಿಭಾಗದ ಸಂಯೋಜಕರ ಸೂಕ್ತ ಕ್ರಮಕ್ಕಾಗಿ
3 ನಿರ್ದೇಶಕರ ಆಪ್ತ ಸಹಾಯಕರ ಮಾಹಿತಿಗಾಗಿ.